# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 778

ಉತ್ತರಿಸಬೇಕಾದ ದಿನಾಂಕ : 04.03.2021.

ಸದಸ್ಯರ ಹೆಸರು : ಶ್ರೀ ಯು. ಬಿ. ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು.

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಒತ್ತು ನೀಡುವ ದೃಷ್ಟಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು; | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಒತ್ತು ನೀಡುವ ದೃಷ್ಟಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳ ವಿವರಗಳನ್ನು ಅನುಬಂಧದಲ್ಲಿ ಒದಗಿಸಿದೆ. |
| ಆ) | ರಾಜ್ಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಕ್ರೀಡಾಪಟುಗಳನ್ನು ತಯಾರು ಮಾಡುವಲ್ಲಿ ರಾಜ್ಯದ ಪಾತ್ರವೇನು ಹಾಗೂ ಯಾವ ಸ್ಥಾನದಲ್ಲಿದೆ; ಇದಕ್ಕಾಗಿ ಇರುವ ಮೂಲ ಸೌಲಭ್ಯಗಳೇನು? | ರಾಜ್ಯ, ರಾಷ್ಟ್ರ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳನ್ನು ರೂಪಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ವಿವರಗಳು ಕೆಳಕಂಡಂತಿದೆ:-<br>1. **<u>ಕ್ರೀಡಾ ಮೂಲ ಸೌಕರ್ಯಗಳ ಸೃಜನೆ:</u>** ರಾಜ್ಯದ ಕ್ರೀಡಾಪಟುಗಳಿಗೆ ಉನ್ನತ ಗುಣಮಟ್ಟದ ತರಬೇತಿ ಪಡೆಯಲು ಅನುವಾಗುವಂತೆ ಕ್ರೀಡಾ ಮೂಲ ಸೌಕರ್ಯಗಳ ಸೃಜನೆಗೆ ಒತ್ತು ನೀಡಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ವಿಜಯನಗರ ಜಿಲ್ಲೆ ಹೊರತು ಪಡಿಸಿ, 29 ಜಿಲ್ಲಾ ಕೇಂದ್ರಗಳು ಹಾಗೂ 119 ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ರಾಜ್ಯದ 31 ಸ್ಥಳಗಳಲ್ಲಿ ಈಜುಕೊಳಗಳು ಹಾಗೂ 46 ಸ್ಥಳಗಳಲ್ಲಿ ಒಳಾಂಗಣ ಕ್ರೀಡಾಂಗಣಗಳನ್ನು ನಿರ್ಮಿಸಲಾಗಿದೆ. ಅಲ್ಲದೇ, ರಾಜ್ಯದ 16 ಸ್ಥಳಗಳಲ್ಲಿ ಆಧುನಿಕ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್‌ಗಳು ಹಾಗೂ 04 ಸ್ಥಳಗಳಲ್ಲಿ ಹಾಕಿ ಟರ್ಫ್‌ಗಳನ್ನು ಅಳವಡಿಸಲಾಗಿದೆ. |

...೨)

| | | |
|---|---|---|
| | | 2. **ಕ್ರೀಡಾ ಕಲ್ಯಾಣ ಕಾರ್ಯಕ್ರಮಗಳು:** ಕ್ರೀಡಾಪಟುಗಳಿಗೆ ಉತ್ತೇಜನ ನೀಡಲು ಪದಕ ವಿಜೇತರಿಗೆ ನಗದು ಪುರಸ್ಕಾರ, ಪ್ರತಿಭಾವಂತ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ, ಕ್ರೀಡಾ ವಿದ್ಯಾರ್ಥಿ ವೇತನ ಮತ್ತಿತರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಕರ್ನಾಟಕ ರಾಜ್ಯವು ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಉತ್ತೇಜನ ನೀಡುತ್ತಿದ್ದು, ಅಸ್ಸಾಂನ ಗೌಹಾತಿಯಲ್ಲಿ ಜನವರಿ-2020 ರಲ್ಲಿ ನಡೆದ ಖೇಲೋ ಇಂಡಿಯಾ ಯೂತ್ ಗೇಮ್ಸ್-2020 ರಲ್ಲಿ ಕರ್ನಾಟಕದ ಕ್ರೀಡಾಪಟುಗಳು 32 ಚಿನ್ನ, 26 ಬೆಳ್ಳಿ, 22 ಕಂಚಿನ ಪದಕಗಳು ಸೇರಿದಂತೆ ಒಟ್ಟು 80 ಪದಕಗಳನ್ನು ಗೆದ್ದು, ಪದಕ ಪಟ್ಟಿಯಲ್ಲಿ ಕರ್ನಾಟಕ ರಾಜ್ಯವು 4ನೇ ಸ್ಥಾನ ಪಡೆದಿರುತ್ತದೆ. |

**ವೈಎಸ್‌ಡಿ-ಇಬಿಬಿ/11/2021.**

**(ಡಾ|| ನಾರಾಯಣ ಗೌಡ)**
ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.

# ಅನುಬಂಧ

## ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳ ಸಲುವಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳು

1. **ಕ್ರೀಡಾ ಮೂಲ ಸೌಕರ್ಯಗಳ ಸೃಜನೆ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ನಿವೇಶನಗಳಲ್ಲಿ ಕ್ರಿಡಾ ಮೂಲ ಸೌಕರ್ಯಗಳನ್ನು ಸೃಜಿಸುವ ಮೂಲಕ ಕ್ರೀಡಾಪಟುಗಳ ಕ್ರೀಡಾ ತರಬೇತಿಗೆ ಉತ್ತೇಜನ ನೀಡಲಾಗುತ್ತಿದೆ.
2. **ನಗದು ಪುರಸ್ಕಾರ:** ರಾಷ್ಟ್ರೀಯ ಮತ್ತು ಅಂತರ-ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಕೆಳಕಾಣಿಸಿದಂತೆ ನಗದು ಪುರಸ್ಕಾರವನ್ನು ನೀಡಲಾಗುತ್ತಿದೆ:-

**(ರೂ. ಲಕ್ಷಗಳಲ್ಲಿ)**

| ಕ್ರ ಸಂ | ವಿವರ | ಚಿನ್ನ | ಬೆಳ್ಳಿ | ಕಂಚು |
|---|---|---|---|---|
| 1 | ಒಲಂಪಿಕ್ಸ್ | 500.00 | 300.00 | 200.00 |
| 2 | ಏಷಿಯನ್ ಗೇಮ್ಸ್ | 25.00 | 15.00 | 8.00 |
| 3 | ಕಾಮನ್‌ವೆಲ್ತ್ ಗೇಮ್ಸ್ | 25.00 | 15.00 | 8.00 |
| 4 | ವರ್ಲ್ಡ್ ಕಪ್ /ಚಾಂಪಿಯನ್ ಶಿಪ್ (ಭಾರತ ಸರ್ಕಾರದಿಂದ ಅಂಗೀಕೃತವಾಗಿ ಭಾರತ ತಂಡದ ಭಾಗವಾಗಿ ಪ್ರತಿನಿಧಿಸಿರಬೇಕು) | 5.00 | 3.00 | 2.00 |
| 5 | ನ್ಯಾಷನಲ್ ಗೇಮ್ಸ್ (ಪ್ರತಿ ನಾಲ್ಕು ವರ್ಷಗಳಿಗೊಮ್ಮೆ ನಡೆಯುವ ಕ್ರೀಡೆಗಳು) | 5.00 | 3.00 | 2.00 |
| 6 | ನ್ಯಾಷನಲ್ ಚಾಂಪಿಯನ್ ಶಿಪ್ (ಒಲಂಪಿಕ್ ಕ್ರೀಡೆಗಳಿಗೆ) | 2.00 | 1.00 | 0.50 |
| 7 | ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.50 | 0.25 | 0.15 |
| 8 | ಸಬ್ ಜೂನಿಯರ್ ನ್ಯಾಷನಲ್ (ಒಲಂಪಿಕ್ ಕ್ರೀಡೆಗಳಿಗೆ) | 0.25 | 0.15 | 0.10 |

3. **ಏಕಲವ್ಯ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಏಕಲವ್ಯ ಪ್ರಶಸ್ತಿ ನೀಡಲಾಗುವುದು.
4. **ಜೀವಮಾನ ಸಾಧನೆ ಪ್ರಶಸ್ತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ತರಬೇತಿ ನೀಡಿದ ರಾಜ್ಯದ ತರಬೇತುದಾರರಿಗೆ ಅವರ ಜೀವಮಾನ ಸಾಧನೆಗೆ ಪ್ರಶಸ್ತಿ ನೀಡಲಾಗುವುದು.
5. **ಕ್ರೀಡಾ ಪೋಷಕ ಪ್ರಶಸ್ತಿ:** ಕ್ರೀಡೆಯ ಅಭಿವೃದ್ಧಿಗೆ ಗಣನೀಯ ಕೊಡುಗೆ ನೀಡಿದ ಖಾಸಗಿ ಸಂಘ-ಸಂಸ್ಥೆಗಳಿಗೆ ಉತ್ತೇಜನ ನೀಡಲು ಕ್ರೀಡಾ ಪೋಷಕ ಪ್ರಶಸ್ತಿ ನೀಡಲಾಗುತ್ತಿದೆ.
6. **ಶೈಕ್ಷಣಿಕ ಶುಲ್ಕ ಮರುಪಾವತಿ:** ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯದಿಂದ ಪ್ರತಿನಿಧಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ.
7. **ಕ್ರೀಡಾ ವಿದ್ಯಾರ್ಥಿ ವೇತನ:** ರಾಜ್ಯ ಮಟ್ಟದ ಪದಕ ವಿಜೇತರಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಿದ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೆ ರೂ.10,000/- ವಿದ್ಯಾರ್ಥಿ ವೇತನ ನೀಡಿ ಪ್ರೋತ್ಸಾಹಿಸಲಾಗುತ್ತಿದೆ.
8. **ಪರಿಶಿಷ್ಟ ಜಾತಿ ಮತ್ತು ಪಂಗಡದ ಸಾಧಕ ಕ್ರೀಡಾಪಟುಗಳಿಗೆ ವಿಶೇಷ ನಗದು ಪುರಸ್ಕಾರ**: ಅಂತರ-ರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳ ಪದಕ ವಿಜೇತರಿಗೆ ಕ್ರಮವಾಗಿ ತಲಾ ರೂ. 5.00, 3.00 ಮತ್ತು 1.00 ಲಕ್ಷಗಳ ನಗದು ಪುರಸ್ಕಾರ ನೀಡಲಾಗುತ್ತಿದೆ.

9. **ಕ್ರೀಡಾ ವಸತಿ ಶಾಲೆ/ನಿಲಯಗಳು:** ಪ್ರವೇಶ ಪಡೆಯುವ ಪ್ರತಿಭಾವಂತ ಯುವ ಕ್ರೀಡಾಪಟುಗಳಿಗೆ ಉಚಿತ ಊಟೋಪಹಾರ, ವಸತಿ, ಕ್ರೀಡಾ ತರಬೇತಿ ಮತ್ತು ಕ್ರೀಡಾ ಸಮವಸ್ತ್ರ ಒದಗಿಸಲಾಗುತ್ತಿದೆ. ದೈಹಿಕ ಕ್ಷಮತಾ ಪರೀಕ್ಷೆಗಳಲ್ಲಿ ಹಾಗೂ ಕ್ರೀಡಾ ಕೌಶಲ್ಯ ಪರೀಕ್ಷೆ ಆಧಾರಿತವಾಗಿ 5ನೇ ತರಗತಿ ಮೇಲ್ಪಟ್ಟ ಕ್ರೀಡಾಪಟುಗಳಿಗೆ ಆಯ್ಕೆ ಪ್ರಕ್ರಿಯೆ ನಡೆಸಿ, ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ.
10. **ಗರಡಿ ಮನೆ ನಿರ್ಮಾಣ:** ಕುಸ್ತಿ ಕ್ರೀಡಾಪಟುಗಳಿಗೆ ಉತ್ತೇಜನ ನೀಡುವ ಸಲುವಾಗಿ ಗರಡಿ ಮನೆ ನಿರ್ಮಾಣ ಮತ್ತು ನವೀಕರಣಕ್ಕೆ ಆದ್ಯತೆ ನೀಡಲಾಗುತ್ತಿದೆ.
11. **ನಮ್ಮೂರ ಶಾಲೆಗೆ ನಮ್ಮ ಯುವಜನರು:** ಈ ಕಾರ್ಯಕ್ರಮದಡಿ ಕ್ರೀಡಾಕ್ಷೇತ್ರದಡಿ ಸಾಧನೆ ಮಾಡಿದ ಸರಕಾರಿ ಶಾಲೆಗಳು ಕ್ರೀಡಾಚಟುವಟಿಕೆಗಳ ಪ್ರೋತ್ಸಾಹಕ್ಕಾಗಿ ಕ್ರೀಡಾಸಾಮಗ್ರಿಗಳನ್ನು ಪೂರೈಸಿಕೊಳ್ಳಲು ಪ್ರೋತ್ಸಾಹಧನ ಮತ್ತು ದೈಹಿಕ ಶಿಕ್ಷಕರಿಗೆ ಗೌರವ ಧನ ನೀಡಲಾಗುವುದು.
12. **ಯುವ ಶಕ್ತಿ ಕೇಂದ್ರ :** ಯುವ ಜನರ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸಲು ಇಲಾಖಾ ಕ್ರೀಡಾಂಗಣಗಳು, ಕ್ರೀಡಾ ವಸತಿ ನಿಲಯಗಳು ಮತ್ತು ಸರ್ಕಾರಿ ಕಾಲೇಜುಗಳಿಗೆ ಜಿಮ್ ಉಪಕರಣಗಳನ್ನು ಒದಗಿಸಲಾಗುವುದು.
13. **ರಾಜ್ಯ ಕ್ರೀಡಾ ಸಂಸ್ಥೆಗಳಿಗೆ ಅನುದಾನ:** ಮಾನ್ಯತೆ ಪಡೆದ ರಾಜ್ಯ ಕ್ರೀಡಾಸಂಸ್ಥೆಗಳಿಗೆ ಕ್ರೀಡಾಕೂಟಗಳ ಆಯೋಜನೆ, ತರಬೇತಿ ಶಿಬಿರಗಳ ಆಯೋಜನೆ ಹಾಗೂ ಕ್ರೀಡಾಕೂಟಗಳಿಗೆ ರಾಜ್ಯ ತಂಡದ ನಿಯೋಜನೆಗೆ ಅನುದಾನ ನೀಡಲಾಗುತ್ತಿದೆ.
14. **ಸಾಹಸ ಕ್ರೀಡೆಗಳಲ್ಲಿ ತರಬೇತಿ:** ಯುವ ಜನರಿಗೆ ಸಾಹಸ ಕ್ರೀಡಾ ಪ್ರಶಿಕ್ಷಕರಾಗಲು ವಿವಿಧ ಹಂತಗಳ ತರಬೇತಿಯನ್ನು ನೀಡಲಾಗುತ್ತಿದೆ.

*******